ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಮಳಖೇಡದಲ್ಲಿನ ಕಾಗಿಣಾ ಸೇತುವೆ ಪ್ರವಾಹ ಬಂದಾಗೊಮ್ಮೆ ಸಂಚಾರ ಸ್ಥಗಿತಗೊಳ್ಳುತ್ತಿರುವ ಬಗ್ಗೆ

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):-

412 (419) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡದಲ್ಲಿನ ಕಾಗಿಣಾ ಸೇತುವೆ ಪ್ರವಾಹ ಬಂದ ಸಮಯದಲ್ಲಿ ಮುಳುಗಿ ಸಂಚಾರ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹೊಸ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಹೊಸ ಸೇತುವೆ ಮಂಜೂರಾಗಿದ್ದಲ್ಲಿ ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ? (ವಿವರ ನೀಡುವುದು)